ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	640
ಸದಸ್ಯರ ಹೆಸರು	ಶ್ರೀ.ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	17.09.2021
ಉತ್ತರಿಸುವ ಸಚಿವರು	ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕೋವಿಡ್-19 ಕಾಯಿಲೆಯ ಪ್ರಭಾವದಿಂದ ರೈತರು ಬೆಳೆದ ಬೆಳೆಗಳು ಖರೀದಿಯಾಗದೆ ರಾಜ್ಯದ ಸಾವಿರಾರು ರೈತರು ಸಂಕಷ್ಟಕ್ಕೆ ಒಳಗಾಗಿದ್ದು, ಈ ಸಂದರ್ಭದಲ್ಲಿ ರೈತರಿಗೆ ಸಹಾಯವಾಗುವಂತೆ ಸರ್ಕಾರವು ಯಾವುದಾದರೂ ಪರಿಹಾರಗಳನ್ನು ಘೋಷಿಸಿದೆಯೇ; ಘೋಷಿಸಿದ್ದಲ್ಲಿ, ಪರಿಹಾರದ ವಿವರಗಳನ್ನು ನೀಡುವುದು;	2020-21ನೇ ಸಾಲಿನಲ್ಲಿ ಕೋವಿಡ್-19 ಲಾಕ್ ಡೌನ್ ಸಮಸ್ಯೆಯಿಂದ ಸಂಕಷ್ಟಕ್ಕೆ ಒಳಗಾಗಿರುವ ಮುಸುಕಿನ ಜೋಳವನ್ನು ಬೆಳೆದ 2019-20ನೇ ಸಾಲಿಗೆ ರೈತರಿಗೆ ರೂ.5000/-ರಂತೆ ಆರ್ಥಿಕ ನೆರವನ್ನು ಘೋಷಿಸಲಾಗಿದ್ದು, ನೇರ ನಗದು ವರ್ಗಾವಣೆ (DBT) ಮೂಲಕ ರಾಜ್ಯದ 809733 ರೈತರಿಗೆ ರೂ.389.53 ಕೋಟಿ ಪರಿಹಾರವನ್ನು ಪಾವತಿಸಲಾಗಿದೆ.
ಆ)	ಇದರಲ್ಲಿ, ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು;ಈ ಅನುದಾನದಲ್ಲಿ ಪರಿಹಾರ ಪಡೆದ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು).	ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ನೊಂದಣಿಯಾಗಿರುವ ಹಾಸನ ಜಿಲ್ಲೆಯ ಎಲ್ಲಾ ಮುಸುಕಿನ ಜೋಳ ಬೆಳೆಗಾರರನ್ನು ಪರಿಹಾರಕ್ಕಾಗಿ ಪರಿಗಣಿಸಲಾಗಿದೆ. ಪ್ರಸ್ತುತ 74,513 ರೈತರಿಗೆ ಒಟ್ಟು ರೂ. 3718.89 ಲಕ್ಷಗಳ ಪರಿಹಾರಧನವನ್ನು ಪಾವತಿಸಲಾಗಿದೆ. ತಾಲ್ಲೂಕುವಾರು ಮಾಹಿತಿ ಕೆಳಕಂಡಂತಿದೆ.

ಕ್ರ. ಸಂ.	ತಾಲ್ಲೂಕು	ಫಲಾನುಭವಿಗಳ ಸಂಖ್ಯೆ.	ಪರಿಹಾರಧನ (ರೂ ಲಕ್ಷಗಳಲ್ಲಿ)
1	ಆಲೂರು	6726	334.21
2	ಅರಕಲಗೂಡು	11038	551.90
3	ಅರಸೀಕೆರೆ	6360	314.48
4	ಬೇಲೂರು	13162	657.78
5	ಚನ್ನರಾಯ ಪಟ್ಟಣ	5255	262.75
6	ಹಾಸನ	25608	1279.56
7	ಹೊಳೆನರಸೀಪುರ	6362	318.10
8	ಸಕಲೇಶಪುರ	2	0.10
	ಒಟ್ಟು	74513	3718.89

ಕ್ರ. ಸಂ	ಪ್ರಶ್ನೆ	ಉತ್ತರ
ಇ)	ಮೆಕ್ಕೆಜೋಳ ಬೆಳೆದು ಸಂಕಷ್ಟಕ್ಕೀಡಾಗಿರುವ ರೈತರಿಗೆ ತಲಾ ರೂ. 5000/- ದಂತೆ ಪರಿಹಾರ ನೀಡುವ ಯೋಜನೆಯನ್ನು ಸರ್ಕಾರವು ಅಪ್ಪಾನಗೊಳಿಸಿದೆಯೇ; ಹಾಗಿದ್ದಲ್ಲಿ, ಹಾಸನ ಜಿಲ್ಲೆಗೆ ಈ ಯೋಜನೆಯಡಿ ಬಿಡುಗಡೆ ಮಾಡಲಾದ ಅನುದಾನವೆಷ್ಟು? (ಈ ಅನುದಾನವನ್ನು ಪಡೆದಿರುವ ಫಲಾನುಭವಿಗಳ ವಿವರವನ್ನು ತಾಲ್ಲೂಕುವಾರು ನೀಡುವುದು).	ಕೋವಿಡ್-19 ಸಂದರ್ಭದಲ್ಲಿ ಮುಸುಕಿನ ಜೋಳ ಬೆಳೆದು ಆರ್ಥಿಕ ಸಂಕಷ್ಟಕ್ಕೊಳಗಾದ ರೈತರಿಗೆ ನೆರವಾಗಲು ಮುಸುಕಿನ ಜೋಳದ ನೇರ ನಗದು ವರ್ಗಾವಣೆ ಯೋಜನೆಯನ್ನು ಘೋಷಿಸಲಾಗಿದ್ದು, ಹಾಸನ ಜಿಲ್ಲೆಯಲ್ಲಿ ಪ್ರಸ್ತುತ 74513 ರೈತರಿಗೆ ರೂ.5000/-ರಂತೆ ನೇರ ನಗದು ವರ್ಗಾವಣೆ ಮೂಲಕ ಒಟ್ಟು ರೂ.3718.89 ಲಕ್ಷಗಳ ಪರಿಹಾರಧವನ್ನು ಪಾವತಿಸಲಾಗಿದೆ. ತಾಲ್ಲೂಕುವಾರು ಫಲಾನುಭವಿಗಳ ವಿವರಗಳನ್ನು ಪ್ರತ್ಯೇಕವಾಗಿ ಸಿಡಿಯಲ್ಲಿ ನೀಡಲಾಗಿದೆ.

ಸಂಖ್ಯೆ: AGRI-ACT/124/2021

(ಬಿ.ಸಿ. ಪಾಟೀಲ್)
ಕೃಷಿ ಸಚಿವರು